ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 28–07–2017

## ಪತ್ರಿಕಾ ಪ್ರಕಟಣೆ

# ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ – 30 ಕೋಟಿ ರೂ. ನಿವ್ವಳ ಲಾಭ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

2016–17ರ ವರ್ಷದಲ್ಲಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆಎಸ್ಎಫ್‌ಸಿ) ಯು 30 ಕೋಟಿ ರೂ. ನಿವ್ವಳ ಲಾಭಗಳಿಸಿದೆ.

ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ಮತ್ತು ಸೇವಾ ಕ್ಷೇತ್ರದ ಘಟಕಗಳಿಗೆ ಸಂಸ್ಥೆಯಿಂದ ಹಣಕಾಸಿನ ನೆರವನ್ನು ನೀಡಿದ್ದು, ಈ ನಿಟ್ಟಿನಲ್ಲಿ 2016–17 ಮತ್ತು ಹಿಂದಿನ ಹಣಕಾಸಿನ ವರ್ಷದಲ್ಲಿ ಸಂಸ್ಥೆಯ ಕಾರ್ಯ ಸಾಧನೆಯಾಗಿದೆ. ರೂ. 733.43 ಕೋಟಿ ಗಳ ಒಟ್ಟಾರೆ ಮಂಜೂರಾತಿಯಲ್ಲಿ ತಯಾರಿಕಾ ವಲಯಕ್ಕೆ ರೂ 309.22 ಕೋಟಿ ಮೊತ್ತದ ಹಣಕಾಸಿನ ನೆರವನ್ನು ಸಂಸ್ಥೆಯಿಂದ ನೀಡಲಾಗಿದ್ದು, ಅದು ಒಟ್ಟು ಮಂಜೂರಾತಿಯ ಶೇ 42 ರಷ್ಟಿದೆ. ಪ್ರವಾಸೋದ್ಯಮ ವಲಯ ಹಾಗೂ ರಿಯಲ್ ಎಸ್ಟೇಟ್ ವಾಣಿಜ್ಯ ವಲಯಕ್ಕೆ ಅನುಕ್ರಮವಾಗಿ ರೂ 77.31 ಕೋಟಿ ಹಾಗೂ 58.92 ಕೋಟಿ ಮೊತ್ತದ ಹಣಕಾಸಿನ ನೆರವನ್ನು ನೀಡಲಾಗಿದ್ದು ಒಟ್ಟು ಮಂಜೂರಾತಿಯಲ್ಲಿ ಪ್ರತಿ ವಲಯದ ಪಾಲು ಶೇ 11 ಹಾಗೂ ಶೇ 8 ರಷ್ಟಿದೆ. ಇನ್ನುಳಿದ ಮೊತ್ತವಾದ ರೂ 37.39 ಕೋಟಿ ಮತ್ತು ರೂ. 250.59 ಕೋಟಿ ಒಟ್ಟು ಮಂಜೂರಾತಿಯ ಶೇ 39 ರಷ್ಟಿದ್ದು ಅದು ಆರೋಗ್ಯ ಹಾಗೂ ಇತರೆ ವಲಯಗಳ ಪಾಲಿನದ್ದಾಗಿದೆ.

ಸಂಸ್ಥೆಯ ಒಟ್ಟಾರೆ ಮಂಜೂರಾತಿಯಾದ ರೂ 733.43 ಕೋಟಿಗಳಲ್ಲಿ ಶೇ 55 ರಷ್ಟು ಅಂದರೆ ರೂ. 405.39 ಕೋಟಿ ಮೊತ್ತವನ್ನು ಮಹಿಳಾ ಉದ್ದಿಮೆದಾರರಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಿಮೆದಾರರಿಗೆ ಶೇ 4 ರ ಬಡ್ಡಿ ಸಹಾಯಧನ

ಯೋಜನೆಯಡಿಯಲ್ಲಿ ಹಾಗೂ ಮೊದಲ ಪೀಳಿಗೆ ಉದ್ದಿಮೆದಾರರಿಗೆ ಶೇ 8 ರ ಬಡ್ಡಿ ಸಹಾಯ ಧನವ ವಿಶೇಷ ಯೋಜನೆಯಡಿಯಲ್ಲಿ ಸಂಸ್ಥೆಯು ಸಾಲ ಮಂಜೂರು ಮಾಡಿದೆ. ಇನ್ನುಳಿದ ಶೇ 45 ರಷ್ಟು ಮೊತ್ತವನ್ನು ಸಾಮಾನ್ಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿದೆ.

ಹಣಕಾಸಿನ ವರ್ಷದ ಪ್ರಾರಂಭದಲ್ಲಿದ್ದ ರೂ 245.12 ಕೋಟಿ ಮೊತ್ತದ ಅನುತ್ಪಾದಕ ಆಸ್ತಿಗಳಲ್ಲಿ ಇಳಿಕೆ ಕಂಡು ಬಂದಿದ್ದು ಅದು 31–03–2017 ರವರೆಗೆ ರೂ 217.80 ಕೋಟಿಗಳಾಗಿದೆ. ಹಿಂದಿನ ವರ್ಷದಲ್ಲಿ ಶೇ 13.47 ರಷ್ಟಿದ್ದ ಒಟ್ಟು ಅನುತ್ಪಾದಕ ಆಸ್ತಿಯು ಪ್ರಸಕ್ತ ವರ್ಷದಲ್ಲಿ ಶೇ 12 ರಷ್ಟಾಗಿದ್ದು, ಪ್ರಸ್ತುತ ವರ್ಷದಲ್ಲಿ ಮತ್ತಷ್ಟು ಇಳಿಕೆಯಾಗಬಹುದೆಂದು ಅಂದಾಜಿಸಲಾಗಿದೆ.

ಸಂಸ್ಥೆಯ ವತಿಯಿಂದ ಪ್ರಾರಂಭದಿಂದಲೂ ಹಲವಾರು ವಿಶೇಷ ಯೋಜನೆಯಡಿಯಲ್ಲಿ ರೂ 3286.21 ಕೋಟಿಗಳ ಅವಧಿ ಸಾಲವನ್ನು ಸಉಮಾರು 29890 ಮಹಿಳಾ ಉದ್ದಿಮೆದಾರರಿಗೆ ನೀಡುವ ಮೂಲಕ ಯಶಸ್ವಿ ಉದ್ದೆಇಮದಾರರಾಗುವಂತೆ ಪ್ರೇರೇಪಿಸಲಾಗಿದೆ. ಅಲ್ಲದೆ, ಸುಮಾರು 20,776 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಿಮೆದಾರರಿಗೆ ಒಟ್ಟು ರೂ 1265.95 ಕೋಟಿ ಮೊತ್ತದ ಹಣಕಾಸಿನ ನೆರವನ್ನು ನೀಡುವ ಮೂಲಕ ಉದ್ದಿಮೆಗಳನ್ನು ಸ್ಥಾಪಿಸಲು ಸಂಸ್ಥೆಯು ಸಹಾಯಹಸ್ತ ನೀಡಿದೆ.

ಇದಲ್ಲದೆ, ಅಲ್ಪಸಂಖ್ಯಾರ ವರ್ಗಗಳ ಉದ್ದಿಮೆದಾರರಿಗೆ ಉತ್ತೇಜನ ನೀಡಲು ಸಂಸ್ಥೆಯವತಿಯಿಂದ ರೂ 1,182.94 ಜೋಟಿ ಮೊತ್ತದ ಹಣಕಾಸಿನ ನೆರವನ್ನು 19,052 ಉದ್ದಿಮೆದಾರರಿಗೆ ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಕೈಗಾರೀಕರಣವನ್ನು ಉತ್ತೇಜಿಸಲು ಕಳೆದ 58 ವರ್ಷಗಳಿಂದಲೂ ಸತತವಾಗಿ ಸಂಸ್ಥೆಯು 1,71,414 ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾನದ ಕೈಗಾರಿಕಾ ಘಟಕಗಳ (ಎಂ.ಎಸ್.ಎಂ.ಇ.ಎಸ್) ಸ್ಥಾಪನೆಗೆ ಒಟ್ಟು ರೂ 15,276.05 ಕೋಟಿ ಮೊತ್ತವನ್ನು ಮಂಜೂರು ಮಾಡುವ ಮೂಲಕ ಗಮನಾರ್ಹ/ಅಸಾಧಾರಣ ಸೇವೆಯನ್ನು ಸಂಸ್ಥೆಯು ಮಾಡಿದೆ.

ಕರ್ನಾಟಕ ಸರ್ಕಾರವು ಸಂಸ್ಥೆಗೆ ಮಹಿಳಾ/ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಾಗೂ ಮೊದಲ ಪೀಳಿಗೆ ಉದ್ದಿಮೆದಾರರಿಗೆ ವಿಶೇಷ ಯೋಜನೆಯಡಿಯಲ್ಲಿ ಬಡ್ಡಿ ಸಹಾಯಧನದ ನೆರವನ್ನು ನೀಡಿದೆ.

<u>2017–18 ನೇ ಸಾಲಿನ ಮುನ್ನೋಟ:</u>

ಪ್ರಸ್ತುತ ವರ್ಷದಲ್ಲಿ ಸಂಸ್ಥೆಯು ತನ್ನ ಎಲ್ಲಾ ಕಾರ್ಯಾಚರಣೆಗಳ ವಿಭಾಗಗಳಲ್ಲಿ ಸಾಧಾರಣ ಪ್ರಗತಿ ಸಾಧಿಸಿರುವುದು ಕಂಡುಬಂದಿದೆ. ರಾಜ್ಯದ ರೋಚಕ ಆರ್ಥಿಕತೆ ಹಾಗೂ ಕರ್ನಾಟಕ ಸರ್ಕಾರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ, ಮಹಿಳಾ ಉದ್ಯಮಿಗಳ,

ಮೊದಲ ಪೀಳಿಗೆ ಉದ್ದಿಮೆದಾರರ ಯೋಜನೆಗಳಿಗೆ ವಿಸ್ತರಿಸಿರುವ ಬಡ್ಡಿ ಸಹಾಯಧನವ ಹೆಚ್ಚಳ ಮತ್ತು ಮರುಪಾವತಿ ಅವಧಿ ವಿಸ್ತರಣೆಯಿಂದಾಗಿ ಸಂಸ್ಥೆಯ ಮುಂದಿನ ವರ್ಷವೂ ಸಹ ಉತ್ತಮ ಪ್ರಗತಿ ತೋರುವ ಆಶಾಭಾವನೆ ಕಾಣುತ್ತಿದೆ. ಬಡ್ಡಿ ಸಹಾಯಧನ ಯೋಜನೆಯನ್ನು ಎಂಎಸ್ಎಂಇ ಗಳಿಗೆ ವಿಸ್ತರಿಸುವ ಪ್ರಸ್ತಾವನೆ ಕರ್ನಾಟಕ ಸರ್ಕಾರದ ಧನಾತ್ಮಕ ಪರಿಗಣನೆಯಲ್ಲಿದ್ದು ಇದು ಜಾರಿಗೆ ಬಂದಲ್ಲಿ ಸಂಸ್ಥೆಯ ವ್ಯವಹಾರ ಮುಂದಿನ ವರ್ಷಗಳಲ್ಲಿ ಸಾಕಷ್ಟು ಬಲವರ್ಧನೆಯಾಗುವ ನಿರೀಕ್ಷೆಯಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್ಎಂ:ಜೆಡಿ:ಜಿಪಿಆರ್

## ಪರೀಕ್ಷೆ ಮುಂದೂಡಿಕೆ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ವಿಧಿವಶರಾದ ಕಾರಣ, ಸರ್ಕಾರವು ಕಲಬುರಗಿ ಹಾಗೂ ಬೀದರ್ ಜಿಲ್ಲೆಗೆ ಜುಲೈ 28 ರಂದು ಸರ್ಕಾರಿ ರಜೆ ಘೋಷಿಸಿರುವ ಹಿನ್ನೆಲೆಯಲ್ಲಿ ಜುಲೈ 28 ರಂದು ನಡೆಯಬೇಕಿದ್ದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ವಿಷಯ ಆಫೀಸ್ ಅಟೋಮೇಷನ್ (41y ಪ್ರಾಯೋಗಿಕ) ಪರೀಕ್ಷೆಯನ್ನು ಜುಲೈ 31 ರ ಸೋಮವಾರಕ್ಕೆ ಮುಂದೂಡಲಾಗಿದೆ ಎಂದು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

ಎಸ್ಎಂ:ಜೆಡಿ:ಜಿಪಿಆರ್.

## ಪ್ರಥಮ ವರ್ಷದ ಡಿಪ್ಲೋಮಾ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಪ್ರವೇಶ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

ಎಸ್.ಎಸ್.ಎಲ್.ಸಿ. ಪಾಸಾದ ಮತ್ತು ಕರ್ನಾಟಕ ರಾಜ್ಯದಲ್ಲಿ ಕನಿಷ್ಠ 05 ವರ್ಷ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆಯ ವತಿಯಿಂದ 2017–18 ನೇ ಸಾಲಿಗೆ ಡಿಪ್ಲೋಮಾ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗಳ ಖಾಲಿ ಉಳಿದ ಸೀಟುಗಳ ಪ್ರವೇಶಕ್ಕಾಗಿ ಆಫ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಿದೆ.

ಪ್ರವೇಶ ಬಯಸುವ ವಿದ್ಯಾರ್ಥಿಗಳು ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಥವಾ ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ

ವೆಬ್‌ಸೈಟ್‌ಗಳಾದ www.dte.kar.nic.in ಮತ್ತು www.kea.kar.nic.in ಮೂಲಕ ಡೌನ್‌ಲೋಡ್ ಮಾಡಿಕೊಂಡು ಅರ್ಜಿ ನೋಂದಣಿ ಶುಲ್ಕ ರೂ 100/– (GM/2A/2B/3A/3B ವರ್ಗದ ಅಭ್ಯರ್ಥಿಗಳಿಗೆ) ಮತ್ತು ರೂ 50/– ( SC/ST/CAT-1 ವರ್ಗದ ಅಭ್ಯರ್ಥಿಗಳಿಗೆ) ಗಳನ್ನು ಕರ್ನಾಟಕ ರಾಜ್ಯದ ಯಾವುದೇ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಗಳಲ್ಲಿ ಖಾತೆ ಹೆಸರು : ED-KEA-DCET-2017 & A/c 36843662415 (IFSC Code SBIN0007080 ಇವರ ಹೆಸರಿಗೆ ಪಾವತಿಸಿ ಬ್ಯಾಂಕ್ ಚಲನ್‌ನ ಪ್ರತಿ ಮತ್ತು ಮಾಹಿತಿ ಪುಸ್ತಕದಲ್ಲಿ ಸೂಚಿಸಿರುವಂತೆ ಎಲ್ಲಾ ಮೂಲ ದಾಖಲೆಗಳು, ಒಂದು ಸೆಟ್ ಜೆರಾಕ್ಸ್ ಪ್ರತಿ ಮತ್ತು ಇತ್ತೀಚಿನ 04 ಪಾಸ್‌ಪೋರ್ಟ್ ಅಳತೆಯ ಫೋಟೋಗಳೊಂದಿಗೆ ಪ್ರಾಂಶುಪಾಲರ ಕಚೇರಿ, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು – 88 ಇಲ್ಲಿಗೆ ದಿನಾಂಕ: 02–08–2017 ರ ಸಂಜೆ 5.30 ರ ಒಳಗಾಗಿ ಸಲ್ಲಿಸುವುದು.

ಹೆಚ್ಚಿನ ವಿವರಗಳಿಗೆ ದೂರವಾಣಿ : 080 28466768 ಮತ್ತು 28446672 ಗಳನ್ನು ಸಂಪರ್ಕಿಸಲು ಕೋರಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿನ ವೈಜ್ಞಾನಿಕ ಅಧಿಕಾರಿ (ವಿಷವಿಜ್ಞಾನ ವಿಭಾಗ/ರಸಾಯನಿಕ ವಿಭಾಗ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ಜುಲೈ 26 ರಂದು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Selection List ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಆಗಸ್ಟ್ 1 ರಂದು ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್ .

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯಲ್ಲಿ ಪ್ರಾರೂಪಕರು (ಸಿವಿಲ್) 04 ಹುದ್ದೆಗಳಿಗೆ ಆಯೋಗದ ಅಂತರ್ಜಾಲದಲ್ಲಿ ಜುಲೈ 26 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ.

ಪ್ರಕಟಿಸಲಾದ ಏಳು ದಿನಗಳೊಳಗಾಗಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ಅಭ್ಯರ್ಥಿಗಳ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಈ ಕೆಳಕಂಡ ಹುದ್ದೆಗಳ 1:2 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಜುಲೈ 26 ರಂದು ಆಯೋಗದ ವೆಬ್‌ಸೈಟ್ www.http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ – 21 (15+06 ಹೈ.ಕ) ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಮೇಲ್ವಿಚಾರಕರು (ಮಹಿಳೆ) – 09 (06+03 ಹೈ.ಕ) ಹುದ್ದೆಗಳು ಹಾಗೂ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಸಹಾಯಕ ಗ್ರಂಥಪಾಲಕರು 11 (ಹೈ.ಕ) ಹುದ್ದೆಗಳು.

ಎಸ್‌ಎಂ:ಜೆಡಿ:ಜಿಪಿಆರ್ .

## ಉಚಿತ ಯೋಗಾ ಶಿಬಿರ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)

**ಶ್ರೀ ಜಯಚಾಮರಾಜೇಂದ್ರ ಭಾರತೀಯ ವೈದ್ಯಕೀಯ ಸಂಸ್ಥೆಯ ಯೋಗ ವಿಭಾಗ, ಧನ್ವಂತರಿ ರಸ್ತೆ, ಆನಂದರಾವ್ ವೃತ್ತದ ಹತ್ತಿರ, ಬೆಂಗಳೂರು ಇಲ್ಲಿ ಸಾರ್ವಜನಿಕರಿಗೆ ಉಚಿತ ಯೋಗಾಸನ, ಪ್ರಾಣಾಯಾಮ, ಧ್ಯಾನ ಶಿಬಿರವನ್ನು ಏರ್ಪಡಿಸಲಾಗಿದೆ.**

**ಶಿಬಿರದಲ್ಲಿ ವಿಶೇಷ ಉಪನ್ಯಾಸಗಳನ್ನು ಏರ್ಪಡಿಸಲಾಗಿದೆ. ತರಗತಿಗಳು ಆಗಸ್ಟ್ 1 ರಿಂದ 31 ರವರೆಗೆ ಆಸ್ಪತ್ರೆಯ ಯೋಗಾ ವಿಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ.**

**ಆಸಕ್ತರು ತಮ್ಮ ಹೆಸರುಗಳನ್ನು ಯೋಗ ವಿಭಾಗದಲ್ಲಿ ನೊಂದಾಯಿಸಲು ಸಂಸ್ಥೆಯ ಪ್ರಾಚಾರ್ಯರು ಕೋರಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9845986119 ಮೂಲಕ ಸಂಪರ್ಕಿಸಬಹುದಾಗಿದೆ.**

**ಎಸ್‌ಎಂ:ಜೆಡಿ:ಜಿಪಿಆರ್.**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ)**

**ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ.** ದಿನಾಂಕ: 30-07-2017ರ **ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.**

1) **ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ** ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ **ಶೀರ್ಷಿಕೆಯಡಿ** ಶ್ರೀ. ಪ್ರಭಾಕರ್.ಪಿ ಮತ್ತು ತಂಡ, ಮೈಸೂರು ರವರಿಂದ ಸುಗಮ ಸಂಗೀತ **ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) **ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ** ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ **ಶೀರ್ಷಿಕೆಯಡಿ** ಶ್ರೀ. ಚಿಂಚನಸೂರ್ ಮತ್ತು ತಂಡ, ಗುಲ್ಬರ್ಗ ರವರಿಂದ ಜಾನಪದ ಗೀತೆ **ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

3) **ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ** ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು **ಏರ್ಪಡಿಸಲಾಗಿದೆ.**

4) **ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ** ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ **ಸೇವೆಯನ್ನು ನಿಗಧಿತ ಶುಲ್ಕ** ನೀಡಿ **ಸಾರ್ವಜನಿಕರು ಪಡೆಯಬಹುದು.**

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ** ಯೂನಿವರ್ಸ್ ಆರ್ಟ್ ಫೌಂಡೇಶನ್ **ಸಂಸ್ಥೆಯ ಸಹಯೋಗದೊಂದಿಗೆ ಕಾತ್ಯಾಯಿನಿ, ಬೆಂಗಳೂರು ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ** ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ, ಮಾಗಡಿ ರಸ್ತೆ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು **ಏರ್ಪಡಿಸಲಾಗಿದೆ.**

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.00 ರಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಗ್ಲೆನ್ ಈಗಲ್ಸ್ ಗ್ಲೋಬಲ್ ಆಸ್ಪತ್ರೆ, ರಿಚ್ ಮಂಡ್ ರಸ್ತೆ ರವರಿಂದ ಉಚಿತ ಕಾರ್ಡಿಯಾಕ್ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ರೀಡಿಂಗ್ ಜೋನ್ ಹಾಗೂ ಇತರೇ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.